# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ:514:ಗ್ರಾಪಂಕಾ:2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:18-01-2020

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರ ನಿರ್ದಿಷ್ಟಪಡಿಸಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 62 ಸೇಇವಿ 2014, ದಿನಾಂಕ:03-10-2017

****

ಉಲ್ಲೇಖಿತ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 62 ಸೇಇವಿ 2014, ದಿನಾಂಕ:03-10-2017 ಅನುಸಾರ ಗ್ರಾಮ ಪಂಚಾಯಿತಿಗಳ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಗ್ರೇಡ್-1 ಇವರುಗಳಿಗೆ ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿ (ಅಭಿವೃದ್ಧಿ) ಇವರುಗಳನ್ನು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಗಳನ್ನಾಗಿ ಪರಿಗಣಿಸಿದ್ದು ಈ ನೌಕರರಿಗೆ ಇಲಾಖಾ ವಿಚಾರಣೆಯ ನಂತರ ಕಠಿಣ ದಂಡನೆ ವಿಧಿಸುವ ಅಧಿಕಾರವನ್ನು ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿ (ಅಭಿವೃದ್ಧಿ) ಇವರುಗಳಿಗೆ ಪ್ರತ್ಯಾಯೋಜಿಸಲಾಗಿದೆ. ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮೇಲ್ಮನವಿ ಪ್ರಾಧಿಕಾರದ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಆದರೆ ಹಲವಾರು ಜಿಲ್ಲಾ ಪಂಚಾಯಿತಿಗಳಲ್ಲಿ ಈ ನೌಕರರುಗಳಿಗೆ ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳೆ ಶಿಸ್ತು ಪ್ರಾಧಿಕಾರವಾಗಿ ದಂಡನೆ ವಿಧಿಸುತ್ತಿದ್ದು, ಇದರಿಂದ ಬಾಧಿತರಾದ ನೌಕರರು ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಪ್ರಕರಣಗಳಲ್ಲಿ ಸರ್ಕಾರವು ಮೇಲ್ಮನವಿ ಪ್ರಾಧಿಕಾರವಾಗಿರುವುದಿಲ್ಲ. ಈ ರೀತಿ ಪ್ರತ್ಯಾಯೋಜಿತ ಅಧಿಕಾರವನ್ನು ಮೀರಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ದಂಡನೆ ವಿಧಿಸುತ್ತಿರುವುದರಿಂದ ಅನಗತ್ಯವಾಗಿ ಸರ್ಕಾರಕ್ಕೆ ಮೇಲ್ಮನವಿಗಳನ್ನು ಸಲ್ಲಿಸಲಾಗುತ್ತಿದೆ.

ಆದುದರಿಂದ ಇನ್ನು ಮುಂದೆ ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿಗಳು ಮತ್ತು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಉಲ್ಲೇಖಿತ ದಿನಾಂಕ:03-10-2017 ಸರ್ಕಾರದ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿರುವ ಅಧಿಕಾರದಂತೆ ಮಾತ್ರ ಶಿಸ್ತು ಪ್ರಾಧಿಕಾರಿಯ ಕರ್ತವ್ಯವನ್ನು ನಿರ್ವಹಿಸುವಂತೆ ಸೂಚಿಸಿದೆ. ತಪ್ಪಿದಲ್ಲಿ ಅಂತಹ ಆದೇಶಗಳನ್ನು ಸರ್ಕಾರದ ಹಂತದಲ್ಲಿ ರದ್ದುಗೊಳಿಸಲಾಗುವುದೆಂದು ತಿಳಿಸಿದೆ.

18/1/2020

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

18/1/20

**ಇವರಿಗೆ :**

1. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಉಪಕಾರ್ಯದರ್ಶಿಗಳು (ಅಭಿವೃದ್ಧಿ).
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತಕಾರ್ಯದರ್ಶಿಗಳು.
4. ನಿರ್ದೇಶಕರು (ಪಂಚಾಯತ್ ರಾಜ್- 1) ಇವರ ಆಪ್ತಸಹಾಯಕರು.
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.
6. ಗಣಕಕೋಶ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).